# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **1158** |
| **ಸದಸ್ಯರ ಹೆಸರು** | : | **ಶ್ರೀ ಮರಿತಿಬ್ಬೇಗೌಡ** |
| **ಉತ್ತರಿಸುವ ದಿನಾಂಕ** | : | **30-09-2020** |
| **ಉತ್ತರಿಸುವ ಸಚಿವರು** | : | **ಉಪ ಮುಖ್ಯಮಂತ್ರಿಗಳು, ಲೋಕೋಪಯೋಗಿ ಹಾಗೂ ಸಮಾಜ ಕಲ್ಯಾಣ ಇಲಾಖಾ ಸಚಿವರು.** |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| **ಅ)** | ಕ್ರೈಸ್ ಸಂಸ್ಥೆಯ (ವಸತಿ ಶಿಕ್ಷಣ ಸಂಸ್ಥೆ) ವಸತಿ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಖಾಯಂ ಸರ್ಕಾರಿ ನೌಕರರಿಗೆ ಡಿ.ಸಿ.ಆರ್.ಜಿ ಜ್ಯೋತಿ ಸಂಜೀವಿನಿ, ಕೆ.ಜಿ.ಐ.ಡಿ ಹಾಗೂ ಇ.ಜಿ.ಐ.ಎಸ್ ಸೌಲಭ್ಯಗಳನ್ನು ಕಲ್ಪಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಹೌದು. |
| **ಆ)** | ಬಂದಿದಲ್ಲಿ, ಸದರಿ ಸೌಲಭ್ಯಗಳನ್ನು ನೀಡದಿರಲು ಕಾರಣಗಳೇನು: (ವಿವರ ನೀಡುವುದು) | ಸಂಘದ ಅಧೀನದಲ್ಲಿರುವ ವಸತಿ ಶಾಲೆಗಳಲ್ಲಿನ ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ಕಾಲಕಾಲಕ್ಕೆ ಸರ್ಕಾರದಲ್ಲಿ ನಿಗಧಿಪಡಿಸುವ ವೇತನ ಶ್ರೇಣಿ, ವಾರ್ಷಿಕ ಬಡ್ತಿ, ನೂತನ ಪಿಂಚಣಿ ಯೋಜನೆ, ವೈದ್ಯಕೀಯ ವೆಚ್ಚ ಮರುಪಾವತಿ, ಗಳಿಕೆ ರಜಾ ನಗಧೀಕರಣ, ಅನುಕಂಪ ಆಧಾರದ ಮೇಲೆ ನೇಮಕಾತಿ ಇತ್ಯಾದಿ ಸೌಲಭ್ಯಗಳನ್ನು ಒದಗಿಸಲಾಗಿದೆ.<br><br>ಉಳಿದಂತೆ ಕೆ.ಜಿ.ಐ.ಡಿ., ಜ್ಯೋತಿ ಸಂಜೀವಿನಿ, ಡಿ.ಸಿ.ಆರ್.ಜಿ, ಕುಮಾರ್ ನಾಯಕ್ ವರದಿಯನ್ವಯ ವಿಶೇಷ ವೇತನ ಬಡ್ತಿ ಮತ್ತು ಇತರೆ ಸೌಲಭ್ಯಗಳನ್ನು ಒದಗಿಸುವ ಪ್ರಸ್ತಾವನೆಗಳು ಪರಿಶೀಲನೆಯಲ್ಲಿದೆ. |
| **ಇ)** | ಯಾವ ಕಾಲಮಿತಿಯಲ್ಲಿ ಸದರಿ ಸೌಲಭ್ಯಗಳನ್ನು ಕಲ್ಪಿಸಲಾಗುವುದು: | |
| **ಈ)** | ಸದರಿ ಶಿಕ್ಷಕರಿಗೆ ಪ್ರಾಂಶುಪಾಲರ ಹುದ್ದೆಗೆ ಮುಂಬಡ್ತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. |
| **ಉ)** | ಹಾಗಿದ್ದಲ್ಲಿ, ಇದುವರೆವಿಗೂ ಮುಂಬಡ್ತಿ ನೀಡದಿರಲು ಕಾರಣಗಳೇನು: (ವಿವರ ನೀಡುವುದು) | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಡಿ ಬರುವ ವಸತಿ ಶಾಲೆಗಳ ಸಹ ಶಿಕ್ಷಕರಿಗೆ ಪ್ರಾಂಶುಪಾಲರ ಹುದ್ದೆಗೆ ಮುಂಬಡ್ತಿ ನೀಡುವ ಹುದ್ದೆಗಳಿಗೆ ದಿನಾಂಕ:17.06.2020ರಂದು ತಾತ್ಕಾಲಿಕ ಜೇಷ್ಠತಾ ಪಟ್ಟಿ ಪ್ರಕಟಿಸಲಾಗಿದೆ. ಈ ತಾತ್ಕಾಲಿಕ ಜೇಷ್ಠತಾ ಪಟ್ಟಿಗೆ 310 ಆಕ್ಷೇಪಣೆಗಳು ಸ್ವೀಕೃತವಾಗಿದ್ದು, ಆಕ್ಷೇಪಣೆಗಳನ್ನು ಪರಿಶೀಲಿಸಲಾಗುತ್ತಿದ್ದು, ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಿ, ನಿಯಮಾನುಸಾರ ಸಹ ಶಿಕ್ಷಕರಿಗೆ ಪ್ರಾಂಶುಪಾಲರ ಹುದ್ದೆಗೆ ಬಡ್ತಿ ನೀಡಲು ಕ್ರಮವಹಿಸಲಾಗುತ್ತಿದೆ. |
| **ಊ)** | ಯಾವ ಕಾಲಮಿತಿಯಲ್ಲಿ ಅವರಿಗೆ ಮುಂಬಡ್ತಿಯನ್ನು ನೀಡಲಾಗುವುದು? | |

**ಸಂಖ್ಯೆ: ಸಕಇ 327 ಮೊದೇಶಾ 2020**

(ಗೋವಿಂದ ಎಂ. ಕಾರಜೋಳ)
ಉಪ ಮುಖ್ಯಮಂತ್ರಿಗಳು, ಲೋಕೋಪಯೋಗಿ ಹಾಗೂ
ಸಮಾಜ ಕಲ್ಯಾಣ ಇಲಾಖಾ ಸಚಿವರು.